# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಯು.ಎಸ್.ನರ್ಸೇಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಯಲ್ಲಾಪುರ ಹಾಗೂ ಶ್ರೀ ಅಬ್ದುಲ್ ಅಜೀಜ್, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಯಲ್ಲಾಪುರ ಇವರುಗಳ ವಿರುದ್ಧ ಇಲಾಖಾ ವಿಚಾರಣೆ – 2ನೇ ಬಾರಿ ಮಂಡನಾಧಿಕಾರಿ ಬದಲಾವಣೆ ಬಗ್ಗೆ – ಆದೇಶ.

ಓದಲಾಗಿದೆ.

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 155 ಇಎನ್‌ಕ್ಯೂ 2016 ದಿನಾಂಕ 03.11.2017
2. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 155 ಇಎನ್‌ಕ್ಯೂ 2016 ದಿನಾಂಕ 07.06.2018
3. ಶ್ರೀ ಶಿವರಾಮ ಎಸ್. ಗಾಂವಕರ, ಸಹಾಯಕ ಯೋಜನಾಧಿಕಾರಿ, ಡಿ.ಆರ್.ಡಿ.ಎ. ಕೋಶ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರು ಸಲ್ಲಿಸಿರುವ ಮನವಿ ದಿನಾಂಕ: 06.08.2018

*****

ಪ್ರಸ್ತಾವನೆ:

ಉತ್ತರ ಕನ್ನಡ ಜಿಲ್ಲೆ, ಯಲ್ಲಾಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ 2010-11 ಹಾಗೂ 2011-12ನೇ ಸಾಲಿನಲ್ಲಿ ಕೈಗೊಂಡ 5 ಕಾಮಗಾರಿಗಳ ಪೈಕಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದೇ 4 ಕಾಲು ಸುಂಕ ನಿರ್ಮಾಣ ಕಾಮಗಾರಿಗಳ ಬದಲಾಗಿ 2 ಸೇತುವೆಗಳ ನಿರ್ಮಾಣ ಮಾಡಿ ತೀವ್ರತರವಾದ ಕರ್ತವ್ಯ ಲೋಪವೆಸಗಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 03.11.2017ರ ಆದೇಶದಲ್ಲಿ ಶ್ರೀ ಸಂಗಪ್ಪ ಹುಚ್ಚಪ್ಪ ಮಿಟ್ಟಲ್ಕೋಡ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಧಾರವಾಡ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಸಹಾಯಕ ಕಾರ್ಯದರ್ಶಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು:-

1. ಶ್ರೀ ಯು.ಎಸ್.ನರ್ಸೇಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಯಲ್ಲಾಪುರ.
2. ಶ್ರೀ ಅಬ್ದುಲ್ ಅಜೀಜ್, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಯಲ್ಲಾಪುರ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ 07.06.2018ರ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 155 ಇಎನ್‌ಕ್ಯೂ 2016, ದಿನಾಂಕ. 03.11.2017ರಲ್ಲಿ **ಸಹಾಯಕ ಕಾರ್ಯದರ್ಶಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ** ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದ್ದನ್ನು ರದ್ದುಪಡಿಸಿ, ಸಹಾಯಕ ಯೋಜನಾಧಿಕಾರಿ

(ಡಿ.ಆರ್.ಡಿ.ಎ.), ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಸದರಿ ಪ್ರಕರಣದಲ್ಲಿ ದಿನಾಂಕ: 07.06.2018 ರ ಆದೇಶದಲ್ಲಿ ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿರುವ ಶ್ರೀ ಶಿವರಾಮ ಎಸ್. ಗಾಂವಕರ, ಸಹಾಯಕ ಯೋಜನಾಧಿಕಾರಿ, ಡಿ.ಆರ್.ಡಿ.ಎ. ಕೋಶ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರು ದಿನಾಂಕ 30.04.2018 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಚೇರಿ ಪತ್ರ ಸಂಖ್ಯೆ: ಜಿಪಂಆ/ಲೋಕೊ/ಕವಿಮಸ/ಸಿಆರ್/2014-15, ದಿನಾಂಕ: 02.08.2016ರಲ್ಲಿ ತಮ್ಮ ವಿರುದ್ಧ ಆಪಾದನೆ ಮಾಡಲಾಗಿದ್ದು, ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ತಮ್ಮ ಮೇಲೆ ಆರೋಪ ಇಟ್ಟುಕೊಂಡು ಸಮಾನ ವೃಂದದ ಅಧಿಕಾರಿಗಳ ವಿರುದ್ಧದ ಇಲಾಖಾ ವಿಚಾರಣೆಯಲ್ಲಿ ಮಂಡನಾಧಿಕಾರಿಯನ್ನಾಗಿ ಕರ್ತವ್ಯ ನಿರ್ವಹಿಸುವುದು ಸೂಕ್ತವಲ್ಲವೆಂದು ಅಭಿಪ್ರಾಯ ವ್ಯಕ್ತಪಡಿಸಿ, ಮಂಡನಾಧಿಕಾರಿಯನ್ನಾಗಿ ನೇಮಿಸಿರುವುದನ್ನು ರದ್ದುಪಡಿಸುವಂತೆ ಕೋರಿರುತ್ತಾರೆ.

ಆದ್ದರಿಂದ, ಸರ್ಕಾರವು ಸದರಿ ಪ್ರಕರಣದಲ್ಲಿ ಆದೇಶ ಸಂಖ್ಯೆ : ಗ್ರಾಅಪ 155 ಇಎನ್‌ಕ್ಯೂ 2016, ದಿನಾಂಕ. 07.06.2018ರಲ್ಲಿ ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ.), ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದ್ದನ್ನು ರದ್ದುಪಡಿಸಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಕಾರವಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ ಗ್ರಾಅಪ 155 ಇಎನ್‌ಕ್ಯೂ 2016, ಬೆಂಗಳೂರು**
**ದಿನಾಂಕ. 15.10.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 155 ಇಎನ್‌ಕ್ಯೂ 2016, ದಿನಾಂಕ. 07.06.2018ರಲ್ಲಿ ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ.), ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದ್ದನ್ನು ರದ್ದುಪಡಿಸಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಕಾರವಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಮಂಡನಾಧಿಕಾರಿಯವರು ಕೂಡಲೇ ವಿಚಾರಣಾಧಿಕಾರಿಯವರನ್ನು ಸಂಪರ್ಕಿಸಿ ಇಲಾಖಾ ವಿಚಾರಣೆಯನ್ನು ತ್ವರಿತವಾಗಿ ಕೈಗೊಂಡು 3 ತಿಂಗಳೊಳಗಾಗಿ ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸುವ ದಿಸೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ), 15/10/2018
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)

2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉತ್ತರ ಜಿಲ್ಲಾ ಪಂಚಾಯತ್, ಕಾರವಾರ / ಧಾರವಾಡ.
6. ಶ್ರೀ ಸಂಗಪ್ಪ ಹುಚ್ಚಪ್ಪ ಮಿಟ್ಟಲ್ಕೋಡ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ.ಎಂಐಜಿ-2/78ಮ ಕೆ.ಹೆಚ್.ಬಿ. ಕಾಲೋನಿ, ಡಿ.ಎನ್.ಕೊಪ್ಪ, ಧಾರವಾಡ - 580008. (ಮೊಬೈಲ್ ಸಂಖ್ಯೆ. 9448769634)
7. ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ.), ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ - ಸಂಬಂಧಿಸಿದ ದಾಖಲೆಗಳನ್ನು ಮಂಡನಾಧಿಕಾರಿಯವರಿಗೆ ಹಸ್ತಾಂತರಿಸುವಂತೆ ಸೂಚಿಸಿದೆ.
8. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಕಾರವಾರ - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
9. ಸಹಾಯಕ ಕಾರ್ಯದರ್ಶಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ - ಶ್ರೀ ಯು.ಎಸ್. ನರ್ಸೇಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಏತ ನೀರಾವರಿ ಉಪ ವಿಭಾಗ, ನಂ.2 ನವಿಲುತೀರ್ಥ, ಸವದತ್ತಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
10. ಶ್ರೀ ಅಬ್ದುಲ್ ಅಜೀಜ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಯಲ್ಲಾಪುರ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
13. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
14. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.